ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ರವರ ಕಛೇರಿ, ಚಾಮರಾಜನಗರ ವೃತ್ತ, ಚಾಮರಾಜನಗರ

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯಪಡೆ ಮುಖ್ಯಸ್ಥರು), ಕರ್ನಾಟಕ ಹಾಗೂ ಆಯ್ಕೆ ಪ್ರಾಧಿಕಾರ, ಬೆಂಗಳೂರು ರವರ ಕಛೇರಿ ಅಧಿಸೂಚನೆ ಸಂಖ್ಯೆ:
**KFD/HOFF/B9(RCT)/3/2022-PnR-KFD ದಿನಾಂಕ: 17.11.2023 ರಂತೆ**

**2023-24ನೇ ಸಾಲಿನಲ್ಲಿ ಚಾಮರಾಜನಗರ ವೃತ್ತದ 77 ಗಸ್ತು ಅರಣ್ಯ ಪಾಲಕ ಗ್ರೂಪ್ 'ಸಿ' ವೃಂದದ ಹುದ್ದೆಗಳಿಗೆ ನೇರ ನೇಮಕಾತಿ**

ಹಾಗೂ

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯಪಡೆ ಮುಖ್ಯಸ್ಥರು), ಕರ್ನಾಟಕ ಹಾಗೂ ಆಯ್ಕೆ ಪ್ರಾಧಿಕಾರ, ಬೆಂಗಳೂರು ರವರ ಕಛೇರಿ ಅಧಿಸೂಚನೆ ಸಂಖ್ಯೆ:
**KFD/HOFF/B9(RCT)/1/19-20-PnR-KFD ದಿನಾಂಕ: 02.03.2020 ರಂತೆ**
**ಚಾಮರಾಜನಗರ ವೃತ್ತಕ್ಕೆ ಸಂಬಂಧಿಸಿದಂತೆ ಒಟ್ಟು 06 ಗಸ್ತು ಅರಣ್ಯ ಪಾಲಕ ಗ್ರೂಪ್ 'ಸಿ' ವೃಂದದ ಭರ್ತಿಯಾಗದೆ ಉಳಿದ ಹಿಂಬಾಕಿ ಹುದ್ದೆಗಳಿಗೆ ನೇರ ನೇಮಕಾತಿ**

# ತಿದ್ದುಪಡಿ ಪ್ರಕಟಣೆ

ಸರ್ಕಾರದ ಅಧಿಸೂಚನೆಸಂಖ್ಯೆ: FEE 203 FEG 2015 ದಿನಾಂಕ: 06.08.2019ರ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2019 ರನ್ವಯ ಗಸ್ತು ಅರಣ್ಯ ಪಾಲಕ ವೃಂದಕ್ಕೆ ಸಂಬಂಧಿಸಿದಂತೆ ಚಾಮರಾಜನಗರ ವೃತ್ತಕ್ಕೆ ಸಂಬಂಧಿಸಿದಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯಪಡೆ ಮುಖ್ಯಸ್ಥರು), ಕರ್ನಾಟಕ ಹಾಗೂ ಆಯ್ಕೆ ಪ್ರಾಧಿಕಾರ, ಬೆಂಗಳೂರು ರವರು ಆಯ್ಕೆ ಪ್ರಾಧಿಕಾರವಾಗಿರುತ್ತಾರೆ.

ವೃಂದ ಮತ್ತು ನೇಮಕಾತಿ ನಿಯಮ ಹಾಗೂ ಅಧಿಸೂಚನೆಯಲ್ಲಿನ ಷರತ್ತುಗಳನ್ವಯ ದೈಹಿಕ ತಾಳ್ವಿಕೆ ಪರೀಕ್ಷೆ [Physical Endurance Test], ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ [Physical Efficiency Test] ಹಾಗೂ ದೇಹ ದಾರ್ಢ್ಯತೆ ಪರೀಕ್ಷೆ [Physical Standard Test] ಗಳಿಗೆ ಮೆರಿಟ್ ಹಾಗೂ ನೇರ ಮತ್ತು ಸಮತಳ ಬಿಂದುಗಳ ಅನುಸಾರ ಅರ್ಹತೆ ಪಡೆದ ಅಭ್ಯರ್ಥಿಗಳ 1:20 (ಹುದ್ದೆ:ಅಭ್ಯರ್ಥಿ) ತಾತ್ಕಾಲಿಕ ಅರ್ಹತಾ ಪಟ್ಟಿಯನ್ನು ಇಲಾಖೆಯ ಅಂತರ್ಜಾಲ **https://aranya.gov.in/**ದಲ್ಲಿ ನೇಮಕಾತಿ (Recruitment) ಶೀರ್ಷಿಕೆಯಡಿ ಪ್ರಕಟಿಸಲಾಗಿದೆ. ಹಾಗೂ ಪ್ರತೀ ಪ್ರವರ್ಗದಲ್ಲಿ ತಾತ್ಕಾಲಿಕವಾಗಿ ಆಯ್ಕೆಯಾಗಿರುವ ಕೊನೆಯ ಅಭ್ಯರ್ಥಿಯ

ಗಳಿಸಿರುವ ಅಂಕಗಳ ಶೇಕಡವಾರು ಮಾಹಿತಿಯ ವಿವರವನ್ನು ದಿನಾಂಕ: 30.07.2024 ರಂದು ಪ್ರಕಟಿಸಲಾಗಿದ್ದು, ಈ ಕುರಿತು ಯಾವುದಾದರೂ ಆಕ್ಷೇಪಣೆ ಇದ್ದಲ್ಲಿ ಪೂರಕ ದಾಖಲಾತಿಗಳೊಂದಿಗೆ ಸ್ಪಷ್ಟ ರೀತಿಯಲ್ಲಿ ಆಕ್ಷೇಪಣೆಯನ್ನು ವಿವರಿಸಿ ಇ-ಮೇಲ್ chnfwrecruitment2023@gmail.com ಮೂಲಕ ಈ ಕಛೇರಿಗೆ ದಿನಾಂಕ: 06.08.2024 ರ ಸಂಜೆ 5.30 ಗಂಟೆಯೊಳಗೆ ಸಲ್ಲಿಸಬಹುದೆಂದು ಪ್ರಕಟಿಸಲಾಗಿತ್ತು.

ಮುಂದುವರೆದು, ಮೇಲಿನಂತೆ ನಿಗಧಿಪಡಿಸಲಾದ ದಿನಾಂಕವನ್ನು ಒಂದು ದಿನ ವಿಸ್ತರಿಸಲಾಗಿದ್ದು, ದಿನಾಂಕ: 06.08.2024 ರ ಸಂಜೆ 5.30 ಗಂಟೆಯ ಬದಲಾಗಿ **ದಿನಾಂಕ: 07.08.2024 ರ ಸಂಜೆ 5.30 ಗಂಟೆಯೊಳಗೆ** ಇ-ಮೇಲ್ **chnfwrecruitment2023@gmail.com** ಮೂಲಕ ಈ ಕಛೇರಿಗೆ ಸಲ್ಲಿಸಬಹುದಾಗಿರುತ್ತದೆ.

**ಈ ಮೇಲೆ ನಿಗದಿಪಡಿಸಿದ ದಿನಾಂಕ ಹಾಗೂ ಸಮಯದ ನಂತರ ಮತ್ತು ಈ ಮೇಲಿನ ವಿಧಾನವನ್ನು (ಇ-ಮೇಲ್) ಹೊರತುಪಡಿಸಿ ಇತರೆ ವಿಧಾನದ ಮೂಲಕ ಸ್ವೀಕೃತವಾಗುವ ಹಾಗೂ ಅಸ್ಪಷ್ಟ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ 1:20 (ಹುದ್ದೆ:ಅಭ್ಯರ್ಥಿ) ತಾತ್ಕಾಲಿಕ ಅರ್ಹತಾ ಪಟ್ಟಿಯಲ್ಲಿನ ಅಭ್ಯರ್ಥಿಗಳ ಕುರಿತು ಯಾವುದೇ ಆಕ್ಷೇಪಣೆಗಳು ಯಾರಿಂದಲೂ ಸ್ವೀಕೃತವಾಗದಿದ್ದಲ್ಲಿ, ಮುಂದಿನ ಆಯ್ಕೆ ಪ್ರಕ್ರಿಯೆಯನ್ನು ಅಧಿಸೂಚನೆಯನ್ವಯ ಹಾಗೂ ನಿಯಮಾನುಸಾರ ಜರುಗಿಸಲಾಗುವುದು.**

ದಿನಾಂಕ: **31.07.2024**

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,
ಚಾಮರಾಜನಗರ ವೃತ್ತ,
ಚಾಮರಾಜನಗರ